# ಅಖಿಲ ಭಾರತ ಗೇರು ಬೆಳೆಗಾರರ ಸಂಘ ಶೀಘ್ರ ಅಸ್ತಿತ್ವಕ್ಕೆ

## ಮೊಟ್ಟೆತ್ತಡ್ಕ ಗೇರು ಸಂಶೋಧನ ಕೇಂದ್ರದ ಸಭೆಯಲ್ಲಿ ಚರ್ಚೆ



ಪುತ್ತೂರಿನ ಮೊಟ್ಟೆತ್ತಡ್ಕ ರಾಷ್ಟ್ರೀಯ ಗೇರು ಸಂಶೋಧನ ಕೇಂದ್ರದಲ್ಲಿ ಪೂರ್ವಭಾವಿ ಸಭೆ ನಡೆಯಿತು.

**ಮೊಟ್ಟೆತ್ತಡ್ಕ** ಜೂ. 2: ಗೇರು ಬೆಳೆಗಾರರ ಹಿತಾಸಕ್ತಿಯನ್ನು ರಕ್ಷಿಸುವ ಸಲುವಾಗಿ ಅಖಿಲ ಭಾರತ ಗೇರು ಬೆಳೆಗಾರರ ಸಂಘವನ್ನು ಹುಟ್ಟು ಹಾಕುವ ನಿಟ್ಟಿನಲ್ಲಿ ಪ್ರಯತ್ನಗಳು ಪುತ್ತೂರಿನಲ್ಲಿ ನಡೆಯುತ್ತಿದ್ದು, ಶೀಘ್ರ ಸಂಘ ಅಸ್ತಿತ್ವಕ್ಕೆ ಬರಲಿದೆ.

ಸಂಘವನ್ನು ಹುಟ್ಟು ಹಾಕುವ ನಿಟ್ಟಿನಲ್ಲಿ ಪುತ್ತೂರಿನ ಮೊಟ್ಟೆತ್ತಡ್ಕ ರಾಷ್ಟ್ರೀಯ ಗೇರು ಸಂಶೋಧನ ಕೇಂದ್ರದಲ್ಲಿ ಪೂರ್ವಭಾವಿ ಸಭೆ ನಡೆಸಿ ಚರ್ಚಿಸಲಾಯಿತು.

ಇತ್ತೀಚಿನ ವರ್ಷಗಳಲ್ಲಿ ಉತ್ತಮ ದರ ಹಾಗೂ ಉಪಯುಕ್ತ ಗುಣಗಳಿಂದಾಗಿ ಗೇರು ಕೃಷಿ ಜನಪ್ರಿಯವಾಗುತ್ತಿದೆ. ಆದರೆ ದಿಢೀರ್ ದರ ಕುಸಿತ, ಮಧ್ಯವರ್ತಿಗಳ ಹಾವಳಿ, ಕೃಷಿಕರಿಗೆ ಸರಕಾರದ ಮಟ್ಟದಲ್ಲಿ ಧ್ವನಿ ಇಲ್ಲದಿರುವುದು, ಬೆಲೆಯಲ್ಲಿ ಸ್ಥಿರತೆ ಕಾಯ್ದುಕೊಳ್ಳುವುದು ಇತ್ಯಾದಿ ಹಲವಾರು ಸಮಸ್ಯೆಗಳೂ ಬೆಳೆಗಾರರನ್ನು ಕಾಡುತ್ತಿವೆ. ಇಂತಹ ಸಂದರ್ಭ ಬೆಳೆಗಾರರ ಹಿತಾಸಕ್ತಿಯನ್ನು ರಕ್ಷಿಸುವ ಸಲುವಾಗಿ ಅಖಿಲ ಭಾರತ ಗೇರು ಬೆಳೆಗಾರರ ಸಂಘವನ್ನು ಹುಟ್ಟುಹಾಕುವುದು ಉತ್ತಮ ಹಾಗೂ ಅನಿವಾರ್ಯತೆ ಎಂದು ಸಭೆ ನಿರ್ಧರಿಸಿತು.

### ಧ್ಯೇಯೋದ್ದೇಶಗಳ ಚರ್ಚೆ

ಕ್ಯಾಂಪ್ಕೋ ಅಧ್ಯಕ್ಷ ಸತೀಶ್ಚಂದ್ರ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉದ್ದೇಶಿತ ಗೇರು ಬೆಳೆಗಾರರ ಸಂಘದ ಧ್ಯೇಯೋದ್ದೇಶಗಳನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಗೇರು ಕೃಷಿಕರ ಮಾರುಕಟ್ಟೆಯ ಸಮಸ್ಯೆಗಳಿಗೆ ರಾಜ್ಯ ಮತ್ತು ಕೇಂದ್ರದ ಮಟ್ಟದಲ್ಲಿ ಸ್ಪಂದಿಸುವ ಸಮರ್ಥ ವೇದಿಕೆ, ದೇಶದ ಗೇರು ಕೃಷಿಕರ ನಡುವಿನ ಸಂವಹನ, ಸಂಬಂಧಪಟ್ಟ ಇಲಾಖೆಗಳೊಡನೆ ಸಹಯೋಗ, ಗೇರು ಉತ್ಪಾದನ ತಾಂತ್ರಿಕತೆಗಳ ಕುರಿತು ಅರಿವು ಮೂಡಿಸುವುದು, ರೈತ ಉತ್ಪಾದಕ ಕಂಪನಿಗಳನ್ನು ಗೇರಿಗೆ ಸಂಬಂಧಪಟ್ಟಂತೆ ಹುಟ್ಟುಹಾಕಲು ಉತ್ತೇಜನ ಮುಂತಾದ ಚಟುವಟಿಕೆಗಳು ಸಂಘದಿಂದ ನಡೆಯಬೇಕು ಎಂದು ತೀರ್ಮಾನಿಸಲಾಯಿತು.

ಕ್ಯಾಂಪ್ಕೋದಿಂದ ಈ ಸಂಘಕ್ಕೆ ಎಲ್ಲ ಸಹಕಾರ ಸಿಗುವ ಭರವಸೆಯನ್ನು ಸತೀಶ್ಚಂದ್ರ ಅವರು ನೀಡಿದರು. ಜತೆಗೆ ಸಂಘಕ್ಕೆ ಶಾಸಕರು ಮತ್ತು ಸಂಸದರ ಸಹಾಯವನ್ನು ಪಡೆದುಕೊಳ್ಳಬೇಕು ಎಂದು ತೀರ್ಮಾನಿಸಲಾಯಿತು. ಸಭೆಯಲ್ಲಿ ಕ್ಯಾಂಪ್ಕೋ ಈಗಿರುವ ಬೆಳೆಗಳ ಜತೆಗೆ ಗೇರು ಬೀಜ ಸಂಸ್ಕರಣೆಯನ್ನೂ ಕೈಗೆತ್ತಿಕೊಳ್ಳಬೇಕೆಂದು ಕೃಷಿಕರು ಅಭಿಪ್ರಾಯಪಟ್ಟರು.

ಗೇರು ಕೃಷಿಕರಾದ ಕಡಮಜಲು ಸುಭಾಷ್ ರೈ ನನ್ಯ ಅಚ್ಯುತ ಮೂಡೆತ್ತಾಯ, ದೇವಿಪ್ರಸಾದ ಪುಣಚ, ನಟೇಶ್ ಮೂಡಾಯೂರು, ನಾರಾಯಣ ನಾಯಕ್, ಮನೋಹರ ಶೆಟ್ಟಿ ದೇವಣ್ಣ ರೈ ದೊಡ್ಡಬಳ್ಳಾಪುರ ನಾಗರಾಜ್ ಮತ್ತವರ ತಂಡದ ಕೃಷಿಕರು ಹಾಜರಿದ್ದರು.

ಗೇರು ಸಂಶೋಧನ ನಿರ್ದೇಶನಾಲಯದ ನಿರ್ದೇಶಕ ಡಾ। ಗಂಗಾಧರ ನಾಯಕ್ ಸ್ವಾಗತಿಸಿ, ಪ್ರಸ್ತಾವಿಸಿದರು. ಹಿರಿಯ ವಿಜ್ಞಾನಿ ಡಾ। ಮೋಹನ್ ವಂದಿಸಿದರು.